**All India Radio: Bangalore**
**Regional Bulletin In Kannada**
**28.04.2026 / 6.40 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**28.04.2026 / 6.40 p.m.**

****************

ಮುಖ್ಯಾಂಶಗಳು

೧. ಪ್ರಸಕ್ತ ಸಾಲಿನಲ್ಲಿ ೨ ಸಾವಿರದ ೧೬ ಕೋಟಿ ರೂಪಾಯಿ ವಹಿವಾಟು ನಡೆಸಿದ ಕೆಎಸ್‌ಡಿಎಲ್; ೫೦೬ ಕೋಟಿ ರೂಪಾಯಿ ನಿವ್ವಳ ಲಾಭ

೨. ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಅನುತ್ತೀರ್ಣರಾಗಿರುವ ವಿದ್ಯಾರ್ಥಿಗಳು ಕಡ್ಡಾಯವಾಗಿ ಪರೀಕ್ಷೆ-೨ ಬರೆಯುವಂತೆ ಶಿಕ್ಷಣ ಸಚಿವ ಮಧುಬಂಗಾರಪ್ಪ ಮನವಿ

೩. ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಸಮ್ಮುಖದಲ್ಲಿ ಐಐಟಿ ಮದ್ರಾಸ್ ಹಾಗೂ ಭಾರತೀಯ ರತ್ನಗಳ ಮತ್ತು ಆಭರಣ ಸಂಸ್ಥೆ ನಡುವೆ ಒಡಂಬಡಿಕೆ

೪. ದೇಶದಲ್ಲೇ ಅತಿ ದೊಡ್ಡ ನವೋದ್ಯಮ ಕೇಂದ್ರವಾಗಿ ಹೊರಹೊಮ್ಮಿದ ಕರ್ನಾಟಕ- ಸಚಿವ ಪ್ರಿಯಾಂಕ್ ಖರ್ಗೆ ಮಾಹಿತಿ

೫. ರಾಜ್ಯದೆಲ್ಲೆಡೆ ಸಮರೋಪಾದಿಯಲ್ಲಿ ಕುಡಿಯುವ ನೀರಿನ ಸಮಸ್ಯೆ ಬಗೆಹರಿಸುವಂತೆ ಅಧಿಕಾರಿಗಳಿಗೆ ಜಿಲ್ಲಾಡಳಿತ ಸೂಚನೆ

****************

ಸರ್ಕಾರಿ ಸ್ವಾಮ್ಯದ ಕರ್ನಾಟಕ ಸಾಬೂನು ಮತ್ತು ಮಾರ್ಜಕಗಳ ನಿಯಮಿತ- ಕೆಎಸ್‌ಡಿಎಲ್ ೨೦೨೫-೨೬ ಹಣಕಾಸು ವರ್ಷದಲ್ಲಿ ಇದೇ ಮೊದಲ ಬಾರಿಗೆ ೨ ಸಾವಿರದ ೧೬ ಕೋಟಿ ರೂಪಾಯಿ ವಹಿವಾಟು ನಡೆಸಿದ್ದು, ೫೦೬ ಕೋಟಿ ರೂಪಾಯಿ ಲಾಭಗಳಿಸಿದೆ.

ಇದು ಸಂಸ್ಥೆಯ ಪಾಲಿಗೆ ಚಾರಿತ್ರಿಕ ಮೈಲಿಗಲ್ಲಾಗಿದ್ದು, ಸಾರ್ವಜನಿಕ ಉದ್ದಿಮೆಗಳ ಸಾಧನೆಯಲ್ಲಿ ಕಿರೀಟ ಪ್ರಾಯವಾಗಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ತಿಳಿಸಿದ್ದಾರೆ.

ಸಂಸ್ಥೆಯು ಮೊದಲ ಒಂದು ಸಾವಿರ ಕೋಟಿ ರೂಪಾಯಿಗಳ ವಹಿವಾಟು ತಲುಪಲು ೧೦೫ ವರ್ಷ ತೆಗೆದುಕೊಂಡಿತ್ತು. ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಮೂರು ವರ್ಷಗಳಲ್ಲಿ ೨ ಸಾವಿರದ ೧೬ ಕೋಟಿ ರೂಪಾಯಿ ತಲುಪಿದ್ದು, ಅಲ್ಪಾವಧಿಯಲ್ಲಿ ಕೆಎಸ್‌ಡಿಎಲ್ ವಹಿವಾಟು ೬೪೧ ಕೋಟಿ ರೂಪಾಯಿ ಹೆಚ್ಚಳ ಕಂಡಿದೆ ಎಂದು ತಿಳಿಸಿದ್ದಾರೆ.

೫೭ ನೂತನ ಉತ್ಪನ್ನಗಳನ್ನು ಮಾರುಕಟ್ಟೆಗೆ ಬಿಡುಗಡೆ ಮಾಡಲಾಗಿದ್ದು, ಪ್ರಸಕ್ತ ೯೪ ಉತ್ಪನ್ನಗಳು ವಹಿವಾಟು ನಡೆಸುತ್ತಿದೆ ಎಂದು ಮಾಹಿತಿ ನೀಡಿದ್ದಾರೆ.

ಇದೇ ವೇಳೆ, ಗಂಧದ ಮರ ಬೆಳಯಲು ರೈತರಿಗೆ ಉತ್ತೇಜನ ನೀಡಲಾಗುವುದು ಎಂದು ತಿಳಿಸಿದ್ದಾರೆ.

****************

ಎಸ್‌ಎಸ್‌ಎಲ್‌ಸಿ ಪರೀಕ್ಷೆ ೧ ರಲ್ಲಿ ಅನುತ್ತೀರ್ಣವಾಗಿರುವ ವಿದ್ಯಾರ್ಥಿಗಳು ಪರೀಕ್ಷೆ ೨ನ್ನು ತೆಗೆದುಕೊಳ್ಳಬೇಕು ಎಂದು ಶಿಕ್ಷಣ ಸಚಿವ ಮಧು ಬಂಗಾರಪ್ಪ ತಿಳಿಸಿದ್ದಾರೆ.

ಪರೀಕ್ಷೆ ೨ನ್ನು ತೆಗೆದುಕೊಳ್ಳುವ ವಿದ್ಯಾರ್ಥಿಗಳಿಗೆ ಸರ್ಕಾರವೇ ಶುಲ್ಕ ಭರಿಸಲಿದೆ ಎಂದು ಅವರು ಮಾಹಿತಿ ನೀಡಿದ್ದಾರೆ. ವಿಷಯವಾರು ವಿದ್ಯಾರ್ಥಿಗಳು ಅನುತ್ತೀರ್ಣವಾಗಿರುವ ಅಂಕಿ ಅಂಶಗಳನ್ನು ಸಚಿವರು ಪ್ರಕಟಿಸಿದ್ದಾರೆ.

ಪರೀಕ್ಷೆಯ ಫಲಿತಾಂಶದಿಂದಾಗಿ ಯಾವುದೇ ವಿದ್ಯಾರ್ಥಿಯು ನಿರಾಸೆಗೊಂಡು ತನ್ನ ಶಿಕ್ಷಣವನ್ನು ಮೊಟಕುಗೊಳಿಸಬಾರದು ಎಂಬುದು ಸರ್ಕಾರದ ಆಶಯವಾಗಿದೆ. ಈ ಹಿನ್ನೆಲೆಯಲ್ಲಿ, ಅನುತ್ತೀರ್ಣರಾಗಿರುವ ಎಲ್ಲಾ ವಿದ್ಯಾರ್ಥಿಗಳನ್ನು ಮುಂಬರುವ 'ಪರೀಕ್ಷೆ-೨'ಕ್ಕೆ ಕಡ್ಡಾಯವಾಗಿ ನೋಂದಾಯಿಸಿ, ಅವರನ್ನು ಶೈಕ್ಷಣಿಕವಾಗಿ ಸಜ್ಜುಗೊಳಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ

ಇಲಾಖೆಯ ಉಪ ನಿರ್ದೇಶಕರುಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

***************

ದೇಶದ ಯುವಕರಿಗೆ ಹೊಸ ಉದ್ಯೋಗಾವಕಾಶಗಳನ್ನು ಕಲ್ಪಿಸುವ ನಿಟ್ಟಿನಲ್ಲಿ ಭಾರತೀಯ ರತ್ನಗಳ ಮತ್ತು ಆಭರಣ ಸಂಸ್ಥೆ ಕಾರ್ಯ ನಿರ್ವಹಿಸುತ್ತಿದೆ ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ತಿಳಿಸಿದ್ದಾರೆ.

ಉಡುಪಿಯಲ್ಲಿ ಸಂಸ್ಥೆಯ ನೂತನ ಕಟ್ಟಡ ಉದ್ಘಾಟಿಸಿ ಮಾತನಾಡಿದ ಅವರು, ಕರಾವಳಿ ಜಿಲ್ಲೆಗಳು ಆಭರಣ ವಿನ್ಯಾಸ ಕ್ಷೇತ್ರದಲ್ಲಿ ಹೆಸರುವಾಸಿಯಾಗಿದ್ದು, ಇನ್ನಷ್ಟು ಉದ್ಯೋಗವಕಾಶಗಳನ್ನು ಸೃಷ್ಟಿಸುವ ಅಗತ್ಯವಿದೆ ಎಂದು ಹೇಳಿದ್ದಾರೆ.

ಧ್ವನಿ; ನಿರ್ಮಲಾ ಸೀತಾರಾಮನ್ ( ೨೭ ಸೆಕೆಂಡ್ಸ್)

ಇದೇ ವೇಳೆ, ನಿರ್ಮಲಾ ಸೀತಾರಾಮನ್ ಸಮ್ಮುಖದಲ್ಲಿ ಲ್ಯಾಬ್ ಗ್ರೋನ್ ಡೈಮಂಡ್ ತಂತ್ರಜ್ಞಾನದಲ್ಲಿ ವಿಶೇಷ ಮತ್ತು ಉದ್ಯಮ ಆಧಾರಿತ ಪ್ರಮಾಣಿಕೃತ ಪೋಸ್ಟ್ ಆರಂಭಿಸಲು ಇಂಡಿಯನ್ ಇನ್ಸಿಟ್ಯೂಟ್ ಆಫ್ ಜೆಮ್ಸ್ ಅಂಡ್ ಜ್ಯುವೆಲರ್ಸ್ ಮತ್ತು ಐಐಟಿ ಮದ್ರಾಸ್ ನಡುವೆ ಒಡಂಬಡಿಕೆ ಮಾಡಿಕೊಳ್ಳಲಾಗಿದೆ.

ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ತರಬೇತಿ ಕಾರ್ಯಕ್ರಮ, ಕೌಶಲ್ಯದ ಕೊರತೆಯನ್ನು ನೀಗಿಸಲು, ಉದ್ಯೋಗಕ್ಕೆ ಸನ್ನದ್ಧರಾದ ವೃತ್ತಿಪರರನ್ನು ಸೃಷ್ಟಿಸಲು ಮತ್ತು ಮೌಲ್ಯವರ್ಧಿತ ಉತ್ಪಾದನೆ ಉತ್ತೇಜಿಸಲು ಸಹಕಾರಿಯಾಗಲಿದೆ ಎಂದು ತಿಳಿಸಿದ್ದಾರೆ.

ಬಳಿಕ ಮಂಗಳೂರಿನ ದೇರಳಕಟ್ಟೆಯ ಕೆ.ಎಸ್.ಹೆಗ್ಡೆ ಕ್ಷೇಮ ಸಭಾಂಗಣದಲ್ಲಿ 'ವಿಕಸಿತ ಭಾರತ-೨೦೪೭; ಒಂದು ದೃಷ್ಟಿಕೋನ' ಕುರಿತಂತೆ ಉಪನ್ಯಾಸ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಉತ್ತಮ ಶಿಕ್ಷಣ ನೀಡುವ ಮೂಲಕ ನಿಟ್ಟೆ ವಿದ್ಯಾಸಂಸ್ಥೆ ವಿಕಸಿತ ಭಾರತಕ್ಕೆ ಮಹತ್ವಪೂರ್ಣ ಕೊಡುಗೆ ನೀಡಿದೆ ಎಂದು ತಿಳಿಸಿದ್ದಾರೆ.

ಭಾರತದ ಭವಿಷ್ಯವನ್ನು ರೂಪಿಸುವಲ್ಲಿ ಶಿಕ್ಷಣ ಸಂಸ್ಥೆಗಳ ಪಾತ್ರ ಮಹತ್ತರವಾದುದ್ದು ಎಂದು ತಿಳಿಸಿದ್ದಾರೆ.

ಕಳೆದ ಒಂದು ದಶಕದಲ್ಲಿ ಭಾರತವು ಆರ್ಥಿಕ ಮತ್ತು ವೈಜ್ಞಾನಿಕ ಕ್ಷೇತ್ರಗಳಲ್ಲಿ ಗಮನಾರ್ಹ ಪ್ರಗತಿ ಸಾಧಿಸಿದೆ ಎಂದು ಸಚಿವೆ ನಿರ್ಮಲಾ ಸೀತಾರಾಮನ್ ಪ್ರತಿಪಾದಿಸಿದ್ದಾರೆ.

****************

ಭಾರತದ ಸ್ಟಾರ್ಟ್‌ಅಪ್ ಇಕೋ ಸಿಸ್ಟಂಗಳಲ್ಲಿ ಬೆಂಗಳೂರು ೨೦೨೬ರ ಮೊದಲ ತ್ರೈಮಾಸಿಕದಲ್ಲಿ ೮೯ ಒಪ್ಪಂದಗಳ ಮೂಲಕ ೮೨೩ ಮಿಲಿಯನ್ ಡಾಲರ್ ನಿಧಿಯೊಂದಿಗೆ ತನ್ನ ನಾಯಕತ್ವವನ್ನು ಮುಂದುವರಿಸಿದೆ ಎಂದು ಮಾಹಿತಿ ಹಾಗೂ ಜೈವಿಕ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಬೆಂಗಳೂರಿನ ಸಾಧನೆಯನ್ನು ಭಾರತದ ಇತರ  ಪ್ರಮುಖ ನಗರಗಳಿಗೆ ಹೋಲಿಸಿದರೆ, ದೆಹಲಿ ೭೪ ಒಪ್ಪಂದಗಳಲ್ಲಿ ೫೩೮ ಮಿಲಿಯನ್ ಡಾಲರ್ ಮತ್ತು ಮುಂಬೈ ೩೪ ಒಪ್ಪಂದಗಳಲ್ಲಿ  ೪೦೨ ಮಿಲಿಯನ್ ಡಾಲರ್ ನಿಧಿಯನ್ನು ದಾಖಲಿಸಿವೆ.

ಬೆಂಗಳೂರು ಇಂದು ಅಮೆರಿಕ, ಯುರೋಪ್ ಹಾಗೂ ಚೀನಾದ ಹೊರಗೆ ಅತಿದೊಡ್ಡ ಸ್ಟಾರ್ಟ್‌ಅಪ್ ಕೇಂದ್ರವಾಗಿ ಮತ್ತು ಜಾಗತಿಕವಾಗಿ ೫ ನೇ ಅತಿದೊಡ್ಡ ಯುನಿಕಾರ್ನ್ ಕೇಂದ್ರವಾಗಿ ಹೊರಹೊಮ್ಮಿದೆ ಎಂದು ಹೇಳಿದ್ದಾರೆ.

ಡೀಪ್ ಟೆಕ್'ನಿಂದ ದೈನಂದಿನ ತಂತ್ರಜ್ಞಾನದವರೆಗೆ, ಬೆಂಗಳೂರಿನ ಸ್ಟಾರ್ಟ್‌ಅಪ್‌ಗಳು ಪ್ರತಿಯೊಂದು ಪ್ರಮುಖ ವಲಯದಲ್ಲೂ ಪ್ರಾಬಲ್ಯ ಸಾಧಿಸಿವೆ. ಬೆಂಗಳೂರು ನಗರ ಭಾರತದ ತಂತ್ರಜ್ಞಾನ ಆರ್ಥಿಕತೆಯ ಕೇಂದ್ರವಾಗಿದೆ ಎಂದು ಸಂತಸ ವ್ಯಕ್ತಪಡಿಸಿದ್ದಾರೆ.

****************

ಮಂಗಳೂರು ಕುಕ್ಕರ್ ಬಾಂಬ್ ಸ್ಫೋಟ ಪ್ರಕರಣದಲ್ಲಿ ಆರೋಪಿಗೆ ಶಿಕ್ಷೆ ಪ್ರಕಟವಾಗಿದ್ದು, ಕಾಂಗ್ರೆಸ್ ನಾಯಕರು ಕ್ಷಮೆಯಾಚಿಸುವಂತೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಆಗ್ರಹಿಸಿದ್ದಾರೆ.

ಸ್ಫೋಟದ ಬಳಿಕ ಕಾಂಗ್ರೆಸ್ ನಾಯಕರು ಆರೋಪಿಗಳ ಪರವಾಗಿ ಹೇಳಿಕೆ ನೀಡಿದ್ದು, ಪ್ರಕರಣವನ್ನು ಅಪಘಾತ ಎಂದು ತಿಳಿಸಿದ್ದರು. ಈ ಹಿನ್ನೆಲೆಯಲ್ಲಿ ಕ್ಷಮೆಯಾಚಿಸುವಂತೆ ಒತ್ತಾಯಿಸಿದ್ದಾರೆ.

ನ್ಯಾಯಾಲಯದ ಈ ತೀರ್ಪು ಭಯೋತ್ಪಾದನೆಯ ವಿರುದ್ಧ ದೇಶದ ದೃಢ ನಿಲುವನ್ನು ಬಲಪಡಿಸುತ್ತದೆ ಎಂದು ಪ್ರತಿಪಾದಿಸಿದ್ದಾರೆ.

***************

ಧಾರವಾಡ ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಇಲ್ಲ ಎಂದು ಕಾರ್ಮಿಕ  ಸಚಿವ ಸಂತೋಷ ಲಾಡ್ ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕುಡಿಯುವ ನೀರಿನ ಸಮಸ್ಯೆ ಆಗದಂತೆ ಕ್ರಮ ವಹಿಸಲು ಅಧಿಕಾರಿಗಳಿಗೆ ಸೂಚಿಸಲಾಗಿದೆ. ಅಕಾಲಿಕ ಮಳೆ ಆಗಿರುವ ಕುರಿತು ಸರ್ಕಾರಕ್ಕೆ ಮಾಹಿತಿ ಒದಗಿಸಲಾಗಿದೆ. ಮಳೆಯಿಂದ ಹಾನಿಯಾದವರಿಗೆ ಸೂಕ್ತ ಪರಿಹಾರ ನೀಡುವಂತೆ ಸರ್ಕಾರಕ್ಕೆ ಮನವಿ ಮಾಡಲಾಗಿದೆ ಎಂದು ಹೇಳಿದ್ದಾರೆ.

ಹುಬ್ಬಳ್ಳಿ ಮೇಲ್ಸೇತುವೆ ಕಾಮಗಾರಿ ವಿಳಂಬದ ಬಗ್ಗೆ ಪ್ರತಿಕ್ರಿಯಿಸಿದ ಅವರು, ಕಾಮಗಾರಿಗೆ ವೇಗ ನೀಡುವಂತೆ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ತಿಳಿಸಿದ್ದಾರೆ.

***************

ಬೇಸಿಗೆ ಹಿನ್ನೆಲೆಯಲ್ಲಿ ಚಾಮರಾಜನಗರ ಜಿಲ್ಲಾ ಕೇಂದ್ರದಲ್ಲಿ ನೀರು ಪೂರೈಕೆಯಾಗದ ಕುರಿತು ನಗರದ ೨೫ ಹಾಗೂ ೨೬ ವಾರ್ಡ್ ನ ನಿವಾಸಿಗಳು ಜಿಲ್ಲಾಧಿಕಾರಿ ಶ್ರೀರೂಪಾ ಅವರನ್ನು ಭೇಟಿಯಾಗಿ ಇಂದು ಅಲಳು ತೋಡಿಕೊಂಡರು.

ನಿವಾಸಿಗಳ ಸಮಸ್ಯೆ ಆಲಿಸಿದ ಬಳಿಕ ಜಿಲ್ಲಾಧಿಕಾರಿ ಮಾತನಾಡಿ, ರೀ ಬೋರಿಂಗ್, ಟ್ಯಾಂಕರ್ ಮೂಲಕ ನೀರು ಪೂರೈಸುವಂತೆ ಎಂಜಿನಿಯರ್ ಗಳಿಗೆ ಸೂಚನೆ ನೀಡಲಾಗಿದೆ.

ತ್ವರಿತ ಸಮಸ್ಯೆ ಪರಿಹಾರಕ್ಕೆ ಟ್ಯಾಂಕರ್ ಮೂಲಕ ನೀರು ಪೂರೈಸಲಾಗುವುದು. ಎಂದು ಭರವಸೆ ನೀಡಿದ್ದಾರೆ.

***************

ಕೋಲಾರದಲ್ಲಿ ಕುಡಿಯುವ ನೀರನ್ನು ತೋಟಗಾರಿಕೆ, ಕಟ್ಟಡ ನಿರ್ಮಾಣ ಮತ್ತು ವಾಹನ ತೊಳೆಯಲು ಬಳಸುವುದನ್ನು ಕಟ್ಟುನಿಟ್ಟಾಗಿ ನಿಷೇಧಿಸಲಾಗಿದೆ. ಸಾರ್ವಜನಿಕರು ನೀರನ್ನು ಮಿತವಾಗಿ ಬಳಕೆ ಮಾಡಬೇಕು ಎಂದು ಕೋಲಾರ ಜಿಲ್ಲಾಧಿಕಾರಿ ಡಾ.ಎಂ.ಆರ್.ರವಿ ಸೂಚನೆ ನೀಡಿದ್ದಾರೆ.

ಜಿಲ್ಲಾ ವಿಪತ್ತು ನಿರ್ವಹಣಾ ಸಭೆಯಲ್ಲಿ ಮಾತನಾಡಿದ ಅವರು, ಅಕ್ರಮ ವಿದ್ಯುತ್ ಮೋಟಾರ್ ಸಂಪರ್ಕಗಳ ವಿರುದ್ಧ ದಂಡ ವಿಧಿಸಿ, ಮೋಟಾರ್‌ಗಳನ್ನು ವಶಪಡಿಸಿಕೊಳ್ಳಲು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಪಂಪ್ ಅಥವಾ ಮೋಟಾರ್ ಕೆಟ್ಟರೆ ೨೪ ಗಂಟೆಗಳೊಳಗೆ ಹಾಗೂ ಪೈಪ್ ಲೈನ್ ಒಡೆದರೆ ಕೂಡಲೇ ಸರಿಪಡಿಸಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

****************

ಜಿಲ್ಲೆಯಲ್ಲಿ ಯಾವುದೇ ವಿಪತ್ತು ಸಂಭವಿಸಿದಾಗ ಜಿಲ್ಲಾಡಳಿತ, ಸಂಬಂಧಪಟ್ಟ ಅಧಿಕಾರಿಗಳು, ಸರ್ವ ಸನ್ನದ್ಧರಾಗಿರಬೇಕು ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿ ಡಾ. ಕೆ.ಎನ್.ಅನುರಾಧ ತಿಳಿಸಿದ್ದಾರೆ.

ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ, ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ ಹಾಗೂ ಬೆಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಪ್ರಾಧಿಕಾರ ಸಹಯೋಗದಲ್ಲಿ ವಿಮಾನ ದುರಂತಗಳನ್ನು ತಡೆಗಟ್ಟುವ ಕುರಿತ ಅಣುಕು ಪ್ರದರ್ಶನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

****************

ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ವರ್ಗಗಳಿಗೆ ಸಂಬಂಧಿಸಿದಂತೆ ರಾಜ್ಯಾದ್ಯಂತ ಅನೇಕ ಸಮಸ್ಯೆಗಳಿದ್ದು ಅಂತಹ ಸಮಸ್ಯೆಗಳನ್ನು ಆಯೋಗವು ಗಂಭೀರವಾಗಿ ಪರಿಗಣಿಸಿ, ಅವುಗಳಿಗೆ ಪರಿಹಾರ ಒದಗಿಸಲು ಕಟ್ಟು ನಿಟ್ಟಿನ ಕ್ರಮ ಕೈಗೊಳ್ಳಲಿದೆ ಎಂದು ಕರ್ನಾಟಕ ರಾಜ್ಯ ಅನುಸೂಚಿತ

ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗದ ಅಧ್ಯಕ್ಷ ಡಾ.ಮೂರ್ತಿ.ಎಲ್ ತಿಳಿಸಿದ್ದಾರೆ.

********ಮುಕ್ತಾಯ********